# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ಇಂಡಿ.

**OS No.**61/2019

**DW**:2

**ದಿನಾಂಕ 04.02.2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಪಾಟೀ ಸವಾಲುಃ ವಾದಿ ಪರ ಶ್ರೀ.ಐ.ಎಸ್.ಎಮ್. ವಕೀಲರಿಂದ:**

ನನಗೆ ಈ ದಾವೆಯ ಬಗ್ಗೆ ಮಾಹಿತಿ ಇರುತ್ತದೆ. ನನಗೆ ವಾದಿಯರು ಮತ್ತು ಪ್ರತಿವಾದಿಯರು ಗೊತ್ತಿರುತ್ತಾರೆ. 1 ನೇ ವಾದಿ ಮತ್ತು 1 ನೇ ಪ್ರತಿವಾದಿಯ ನಡುವಿನ ಸಂಬಂಧ ನನಗೆ ಗೊತ್ತಿಲ್ಲ. ಈ ದಾವೆಯನ್ನು ದಾರಿ ಸಲುವಾಗಿ ಮಾಡಿರುತ್ತಾರೆ. ನಾನು ವಾದಿ ಮತ್ತು ಪ್ರತಿವಾದಿಯರ ಜಮೀನನ್ನು ನೋಡಿರುತ್ತೇನೆ. ಸದರಿಯವರ ಜಮೀನು ರೂಗಿಯಿಂದ ಮಸಳಿಗೆ ಹೋಗುವ ದಾರಿಯಲ್ಲಿ ಇರುತ್ತದೆ. ಮಸಳಿಯ ದಾರಿಯ ಪೂರ್ವ ದಿಕ್ಕಿಗೆ ವಾದಿ ಮತ್ತು ಪ್ರತಿವಾದಿಯರ ಜಮೀನು ಇರುತ್ತದೆ. ವಾದಿ ಮತ್ತು ಪ್ರತಿವಾದಿಯರ ಉತ್ತರ ದಿಕ್ಕಿಗೆ ಹಳ್ಳ ಇರುತ್ತದೆ ಎಂದರೆ ಸರಿ. ವಾದಿ ಮತ್ತು ಪ್ರತಿವಾದಿಯರು ತಮ್ಮ ಜಮೀನುಗಳಿಗೆ ಹೋಗಲು ಸದರಿ ಹಳ್ಳದ ದಿಕ್ಕಿಗೆ ಹೋಗಬೇಕಾಗುತ್ತದೆ ಎಂದರೆ ನನಗೆ ಗೊತ್ತಿಲ್ಲ. ಮಸಳಿ ಗ್ರಾಮಕ್ಕೆ ಹೋಗುವ ಹಾದಿಯಿಂದ ದಕ್ಷಿಣೋತ್ತರ ಸರ್ಕಾರಿ ಹಾದಿ ಇರುವ ಬಗ್ಗೆ ನನಗೆ ಗೊತ್ತಿಲ್ಲ. ಸದರಿ ಸರ್ಕಾರಿ ಹಾದಿಯನ್ನು ಈಗ ಸರ್ಕಾರದವರು ಕೆನಾಲ್ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಪ್ರತಿವಾದಿಯರು ತಮ್ಮ ಜಮೀನುಗಳಿಗೆ ಹೇಗೆ ಹೋಗುತ್ತಾರೆ ಎಂದು ನನಗೆ ಗೊತ್ತಿಲ್ಲ. ವಾದಿಯರು ತಮ್ಮ ಜಮೀನುಗಳಿಗೆ ಹೇಗೆ ಹೋಗುತ್ತಾರೆ ಎಂದು ನನಗೆ ಗೊತ್ತಿಲ್ಲ. ವಾದಿಯರು ಮತ್ತು ಪ್ರತಿವಾದಿಯರು 1973 ನೇ ಇಸವಿಯಲ್ಲಿ ವಾಟ್ನಿ ಮಾಡಿಕೊಂಡಿರುವ ಬಗ್ಗೆ ನನಗೆ ಗೊತ್ತಿಲ್ಲ. ಸದರಿ ವಾಟ್ನಿಯಲ್ಲಿ ಪ್ರತಿವಾದಿಯರ ಜಮೀನು ಹಾದಿಗೆ ಹತ್ತಿ ಬಂದಿದ್ದು ಮತ್ತು ಸದರಿಯವರ ಜಮೀನಿನ ಮೇಲೆ ವಾದಿಯರು ತಮ್ಮ ಜಮೀನಿಗೆ ಹೋಗುತ್ತಾರೆ ಎನ್ನುವ ಬಗ್ಗೆ ನನಗೆ ಗೊತ್ತಿಲ್ಲ. ವಾದಿಯರಿಗೆ ದಾವಾ ದಾರಿಯನ್ನು ಬಿಟ್ಟು ಬೇರೆ ದಾರಿ ಇಲ್ಲ ಎಂದರೆ ನನಗೆ ಗೊತ್ತಿಲ್ಲ. ನಾನು ಚಾಲಕ ವೃತ್ತಿ ಮಾಡುತ್ತೇನೆ. ನನಗೆ ಈ ದಾವೆಯ ಬಗ್ಗೆ ಯಾವುದೇ ಮಾಹಿತಿ ಇರದೇ ಇದ್ದರು ಸಹ ಪ್ರತಿವಾದಿಯರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯರು ಬೇರೆ ದಾರಿಯಿಂದ ತಮ್ಮ ಜಮೀನುಗಳಿಗೆ ಹೋಗುತ್ತಾರೆ ಎಂದು ಸಾಕ್ಷ್ಯಾ



ಪ್ರಮಾಣ ಪತ್ರದಲ್ಲಿ ಸುಳ್ಳು ಬರೆಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಸಾಕ್ಷಾ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸುಳ್ಳು ಇರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ:**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೆ. ಸರಿ ಇದೆ.

ಸಹಿ/-

ಜೆ.ಎಂ.ಎಫ್.ಸಿ. ನ್ಯಾಯಾಲಯ

ಇಂಡಿ.